ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

ಸಂ: ಕಾಶಿಇ:11:ವರ್ಗಾವಣೆ:2021-22:ವ&ನಿ

ಕಾಲೇಜು & ತಾಂತ್ರಿಕ ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು. ದಿನಾಂಕ:16.07.2021.

## ಸುತ್ತೋಲೆ

ವಿಷಯ: 2021ನೇ ಸಾಲಿನ ಕಾಲೇಜು ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆ ಸಂಬಂಧ ವಿಶೇಷ ಪ್ರಕರಣಗಳಡಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 151 ಡಿಸಿಇ 2020 ದಿನಾಂಕ:29.01.2021 ರಂತೆ ಅಧಿಸೂಚಿಸಲಾದ ಕಾಲೇಜು ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆ ನಿಯಮಗಳು-2021.
2. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 151 ಡಿಸಿಇ 2020 ದಿನಾಂಕ:29.06.2021.
3. ಈ ಕಛೇರಿ ಸಮ ಸಂಖ್ಯೆಯ ದಿನಾಂಕ:01-07-2021 ಮತ್ತು 08-07-2021ರ ವರ್ಗಾವಣೆ ಅಧಿಸೂಚನೆ.

** ** **

ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಕರ್ತವ್ಯನಿರ್ವಹಿಸುತ್ತಿರುವ ಬೋಧಕರ (ಪ್ರಾಧ್ಯಾಪಕರು, ಸಹ/ ಸಹಾಯಕ ಪ್ರಾಧ್ಯಾಪಕರು, ಗ್ರಂಥಪಾಲಕರು ಮತ್ತು ಕ್ರೀಡಾ & ದೈಹಿಕ ಶಿಕ್ಷಣ ನಿರ್ದೇಶಕರು) ವರ್ಗಾವಣೆಗಳನ್ನು ನಿಯಂತ್ರಿಸುವ ಸಲುವಾಗಿ ಉಲ್ಲೇಖಿತ ಸರ್ಕಾರದ ಅಧಿಸೂಚನೆಯಲ್ಲಿ ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆ ನಿಯಂತ್ರಣ) ನಿಯಮಗಳು-2021 ಅನ್ನು ರೂಪಿಸಿ ಅಧಿಸೂಚಿಸಲಾಗಿರುತ್ತದೆ.

ಸದರಿ ವರ್ಗಾವಣೆ ನಿಯಮಗಳ ನಿಯಮಗಳನ್ವಯ ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆಗೆ ಒಳಪಡುವ ಬೋಧಕರ (ಪ್ರಾಧ್ಯಾಪಕರು, ಸಹ/ ಸಹಾಯಕ ಪ್ರಾಧ್ಯಾಪಕರು, ಗ್ರಂಥಪಾಲಕರು ಮತ್ತು ಕ್ರೀಡಾ & ದೈಹಿಕ ಶಿಕ್ಷಣ ನಿರ್ದೇಶಕರು) ವಲಯವಾರು ಪಟ್ಟಿಯನ್ನು ಉಲ್ಲೇಖ (3) ರಂತೆ ಪ್ರಕಟಿಸಿ ಆಕ್ಷೇಪಣೆಗಳನ್ನು ಹಾಗೂ ವಿಶೇಷ ಪ್ರಕರಣಗಳ ಕೋರಿಕೆ ವರ್ಗಾವಣೆಗೆ ಅರ್ಜಿಗಳನ್ನು ಆಹ್ವಾನಿಸಿ ಅರ್ಜಿ/ ವಿನಾಯಿತಿ ಮನವಿ ಸಲ್ಲಿಸಲು ದಿನಾಂಕ:14.07.2021 ಅನ್ನು ಕೊನೆಯ ದಿನಾಂಕವೆಂದು ನಿಗದಿಪಡಿಸಲಾಗಿತ್ತು.

**ಆದರೆ ವಿಶೇಷ ಪ್ರಕರಣಗಳಡಿ ವರ್ಗಾವಣೆಗೆ ಅರ್ಜಿ ಸಲ್ಲಿಸಲು ಹಾಗೂ ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆಯಿಂದ ವಿನಾಯಿತಿ ಪಡೆಯಲು ನಿಗದಿಪಡಿಸಿರುವ ದಿನಾಂಕವನ್ನು ವಿಸ್ತರಿಸುವಂತೆ ಹಲವು ಬೋಧಕರು ಕೋರುತ್ತಿರುವುದರಿಂದ ವಿಶೇಷ ಪ್ರಕರಣಗಳಡಿ ವರ್ಗಾವಣೆಗೆ ಅರ್ಜಿ ಸಲ್ಲಿಸಲು ಹಾಗೂ ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆಗೆ ವಿನಾಯಿತಿ ಅರ್ಜಿಯನ್ನು ಸಲ್ಲಿಸಲು ಈ ಹಿಂದೆ ನಿಗದಿಪಡಿಸಿದ್ದ ದಿನಾಂಕವನ್ನು ವಿಸ್ತರಿಸಿ ದಿನಾಂಕ:19.07.2021 ಅನ್ನು ಕೊನೆಯ ದಿನಾಂಕವೆಂದು ನಿಗದಿಪಡಿಸಲಾಗಿದೆ ಮತ್ತು ಪುನಃ ದಿನಾಂಕವನ್ನು ವಿಸ್ತರಿಸುವುದಿಲ್ಲವೆಂದು ಸ್ಪಷ್ಟಪಡಿಸಲಾಗಿದೆ.**

ದಿನಾಂಕ:14.07.2021ರ ಒಳಗಾಗಿ ವಿಶೇಷ ಪ್ರಕರಣಗಳಡಿ ವರ್ಗಾವಣೆಗೆ ಅರ್ಜಿ ಸಲ್ಲಿಸಲು ಹಾಗೂ ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆಗೆ ಒಳಪಟ್ಟು ವಿನಾಯಿತಿ ಅರ್ಜಿಯನ್ನು ಸಲ್ಲಿಸಲು ಸಾಧ್ಯವಾಗದಿದ್ದ ಬೋಧಕರು ದಿನಾಂಕ:19.07.2021ರೊಳಗಾಗಿ ವಿಶೇಷ ಪ್ರಕರಣಗಳಡಿ ಅರ್ಜಿ ಮತ್ತು ಸಾರ್ವಜನಿಕ ವರ್ಗಾವಣೆಯ ವಿನಾಯಿತಿ ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸುವಂತೆ ಸೂಚಿಸಿದೆ. ಮುಂದುವರೆಯುತ್ತಾ ಉಲ್ಲೇಖ (3) ರಂತೆ ಪ್ರಕಟಿಸಿರುವ ಸಾರ್ವಜನಿಕ ಹಿತಾಸಕ್ತಿಯ ವಲಯವಾರು ವರ್ಗಾವಣೆ ಪಟ್ಟಿಗೆ ಆಕ್ಷೇಪಣೆಗಳಿದ್ದಲ್ಲಿ dce.transfers2021@gmail.com ವಿಳಾಸಕ್ಕೆ ಸಲ್ಲಿಸುವಂತೆ ಸೂಚಿಸಿದೆ. ಭೌತಿಕವಾಗಿ ಸಲ್ಲಿಸುವ ಮತ್ತು ಕೊನೆಯ ದಿನಾಂಕದ ನಂತರ ಸಲ್ಲಿಸುವ ಹಾಗೂ ಅಪೂರ್ಣ ಮಾಹಿತಿಯ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ.

## <u>ವರ್ಗಾವಣೆ ಪ್ರಕ್ರಿಯೆಯ ಪರಿಷ್ಕೃತ ತಾತ್ಕಾಲಿಕ ವೇಳಾಪಟ್ಟಿ:</u>

| ಕ್ರ. ಸಂ. | ವಿವರ | ದಿನಾಂಕ: |
|---|---|---|
| 01 | **ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆಯಿಂದ ವಿನಾಯಿತಿಗಾಗಿ ಮನವಿ ಸಲ್ಲಿಸಲು ಮತ್ತು ವಿಶೇಷ ಪ್ರಕರಣಗಳ ವರ್ಗಾವಣೆಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ** | 19-07-2021 |
| 02 | **ತಾತ್ಕಾಲಿಕ ವರ್ಗಾವಣಾ ಆದ್ಯತಾ ಪಟ್ಟಿ ಪ್ರಕಟಣಾ ದಿನಾಂಕ** | 21-07-2021 |
| 03 | **ತಾತ್ಕಾಲಿಕ ವರ್ಗಾವಣಾ ಆದ್ಯತಾ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ಕೊನೆಯ ದಿನಾಂಕ** | 23-07-2021 |
| 04 | **ವಿಶೇಷ ಪ್ರಕರಣಗಳ ಹಾಗೂ ಸಾರ್ವಜನಿಕ ಹಿತಾಸಕ್ತಿಯ ಅಂತಿಮ ವರ್ಗಾವಣೆ ಆದ್ಯತಾ ಪಟ್ಟಿ ಪ್ರಕಟಣೆ** | 24-07-2021 |
| 05 | **ವಿಶೇಷ ಪ್ರಕರಣಗಳ 1st Round ಕೌನ್ಸಿಲಿಂಗ್** (ವಿವರವಾದ ವೇಳಾಪಟ್ಟಿಯನ್ನು ಅಂತಿಮ ವೇಳಾಪಟ್ಟಿ ಪ್ರಕಟಣೆ ನಂತರ ಪ್ರಕಟಿಸಲಾಗುವುದು) | 25-07-2021 ಮತ್ತು 26-07-2021 |
| 06 | **ವಿಶೇಷ ಪ್ರಕರಣಗಳ 2nd Round ಕೌನ್ಸಿಲಿಂಗ್** (ವಿವರವಾದ ವೇಳಾಪಟ್ಟಿಯನ್ನು ಅಂತಿಮ ವೇಳಾಪಟ್ಟಿ ಪ್ರಕಟಣೆ ನಂತರ ಪ್ರಕಟಿಸಲಾಗುವುದು) | 27-07-2021 |
| 07 | **ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆ ಕೌನ್ಸಿಲಿಂಗ್** (ವಿವರವಾದ ವೇಳಾಪಟ್ಟಿಯನ್ನು ಅಂತಿಮ ವೇಳಾಪಟ್ಟಿ ಪ್ರಕಟಣೆ ನಂತರ ಪ್ರಕಟಿಸಲಾಗುವುದು) | 28-07-2021 ರಿಂದ 31-07-2021 |

***ಉಳಿದಂತೆ ದಿನಾಂಕ:01-07-2021 ಮತ್ತು 08-07-2021 ರ ಸಮ ಸಂಖ್ಯೆಯ ಅಧಿಸೂಚನೆಯ ಎಲ್ಲಾ ಅಂಶಗಳು ಮುಂದುವರೆಯುತ್ತವೆ.***

**ಆಯುಕ್ತರು**
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ**

ಪ್ರತಿಯನ್ನು:

1. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಬೋಧಕರುಗಳಿಗೆ -ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಹಾಗೂ ಕಲಬುರಗಿ-ಮಾಹಿತಿಗಾಗಿ.
3. ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.
4. ರಕ್ಷಾ ಕಡತ.
5. ಕಛೇರಿ ಪ್ರತಿ.